ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ.ಬೆಂ.ಮ.ಪಾ/ಕಾ.ಪಾ.ಅ(ವಿ)/ದಾ.ವ/ತಾಂ.ಮ/03/16-17

ಕಾರ್ಯಪಾಲಕ ಅಭಿಯಂತರು (ವಿದ್ಯುತ್)ರವರ ಕಛೇರಿ
ಬೃ.ಬೆಂ.ಮ.ಪಾ, ದಾಸರಹಳ್ಳಿ ವಲಯ
ಬೆಂಗಳೂರು-73.
ದಿನಾಂಕ: 06.06.2016

ತಾಂತ್ರಿಕ ಮಂಜೂರಾತಿ

ವಿಷಯ:- Providing lighting system to Aladamara park Ward No.12

ಉಲ್ಲೇಖ :- ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ/ಮು.ಅ/ದಾ.ವಿ/ಆ.ಮ/18/16-17 ದಿನಾಂಕ:30.05.2016

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಲಯ) ರವರು 2015-16 ನೇ ಸಾಲಿನ ಅಯವ್ಯಯದ ಲೆಕ್ಕ ಶೀರ್ಷಿಕೆ-ಪಿ0088 ಅಡಿಯಲ್ಲಿ, 2015-16 ನೇ ಸಾಲಿನ ಲೋಕೋಪಯೋಗಿ ವಿದ್ಯುತ್ ಇಲಾಖೆ ದರಪಟ್ಟಿಯ ದರಗಳು/ಅತೀ ಕಡಿಮೆ ದರಗಳು/ ಪಾಲಿಕೆಯಲ್ಲಿನ ಅನುಮೋದನೆಯಲ್ಲಿನ ದರಗಳು ಹಾಗೂ ಬೆಸ್ಕಾಂ ದರಪಟ್ಟಿಯ ದರಗಳ ಆಧಾರದ ಮೇಲೆ ರೂ.5.00 ಲಕ್ಷಗಳಿಗೆ ತಯಾರಿಸಿರುವ ಅಂದಾಜು ಪಟ್ಟಿಗೆ ಉಲ್ಲೇಖ(1) ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ, ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ(1) ರಲ್ಲಿ ಮುಖ್ಯ ಅಭಿಯಂತರರು, ದಾಸರಹಳ್ಳಿ ವಿಭಾಗರವರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಹಾಗೂ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2011-12,ದಿನಾಂಕ:20.07.2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಹಾಗೂ ತಾಂತ್ರಿಕ ಮಂಜೂರಾತಿಯ ಪುಟ ಸಂಖ್ಯೆ: 31 ಕ್ರ.ಸಂ. 03ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:-

1. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ, ಅನುಮೋದನೆ ಪಡೆಯುವುದು.
2. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
3. ರಸ್ತೆ ಇತಿಹಾಸ ಪುಸ್ತಕದಲ್ಲಿ ಸದರಿ ಕಾಮಗಾರಿಯಲ್ಲಿನ ವಿವಿಧ ಕೆಲಸಗಳ ವಿವರಗಳನ್ನು ನಮೂದಿಸುವುದು

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ದಾಸರಹಳ್ಳಿ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಮುಖ್ಯ ಅಭಿಯಂತರರು ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ.
2. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ